ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 311 ಪಬವ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 08.01.2016

## ಅಧಿಸೂಚನೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯ ಮತ್ತು ಕೇಂದ್ರ ಪುರಸ್ಕೃತ ವಿವಿಧ ಯೋಜನೆಗಳನ್ನು ಜಾರಿಗೊಳಸುವ ಸಲುವಾಗಿ ಇಲಾಖೆಯ ವಿವಿಧ ವೃಂದಗಳ ಹುದ್ದೆಗಳನ್ನು ನೇರ ನೇಮಕಾತಿ / ಮುಂಬಡ್ತಿ ಮೂಲಕ ತುಂಬಲಾಗಿದೆ. ಇಲಾಖೆಯ ಹಲವಾರು ಹಿರಿಯ ಅಧಿಕಾರಿಗಳು ಇತರೆ ಇಲಾಖೆಗಳಿಗೆ ನಿಯೋಜನೆ ಮೇಲೆ ತೆರಳರುವುದರಿಂದ ಇಲಾಖೆಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿ ಉಳಿದಿರುತ್ತವೆ. ಹಾಗಾಗಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಕಾಲನಿಗದಿತವಾಗಿ ಅನುಷ್ಠಾನಗೊಳಸಲು ಸಾಧ್ಯವಾಗದೆ ನಿಗದಿತ ಗುರಿ ಸಾಧಿಸಲು ಕಷ್ಟವಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ರಾಜ್ಯದ ಒಟ್ಟು 136 ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ಉದ್ಭವವಾಗಿದ್ದು, ಇದರಿಂದಾಗಿ ತೊಂದರೆಗೆ ಈಡಾಗಿರುವ ಗ್ರಾಮೀಣ ಭಾಗದ ಜನರಿಗೆ ಸಮರ್ಪಕ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ಇಲಾಖೆಗೆ ಅಧಿಕಾರಿಗಳ ಸೇವೆ ಅತ್ಯಂತ ಅವಶ್ಯವಿರುತ್ತದೆ.

ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 22 ಸೇನೌವ 2013 ದಿನಾಂಕ: 07.06.2013ರಲ್ಲಿ ಸಾಮಾನ್ಯ ವರ್ಗಾವಣೆ ಅವಧಿ ಮುಗಿದ ನಂತರ ಮಾಡಲಾಗುವ ವರ್ಗಾವಣೆಗಳಿಗೆ ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆ. ಅದರಂತೆ ಪ್ರಸಕ್ತ ಪ್ರಸ್ತಾವನೆಗೆ ಮಾನ್ಯ ಮುಖ್ಯ ಮಂತ್ರಿಯವರ ಅನುಮೋದನೆಯನ್ನು ಪಡೆಯಲಾಗಿದೆ.

ಆದ್ದರಿಂದ ಇತರೆ ಇಲಾಖೆಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಗೆ ಸೇರಿದ ಉಪ ಕಾರ್ಯದರ್ಶಿ ಮತ್ತು ಆಯ್ಕೆ ಶ್ರೇಣಿ ವೃಂದದ ಈ ಕೆಳಕಂಡ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅವರುಗಳ ಸೇವೆಯನ್ನು ಹಿಂಪಡೆದು ಮುಂದಿನ ಆದೇಶದವರೆಗೆ ಅವರುಗಳ ಹೆಸರುಗಳ ಮುಂದೆ ನಮೂದಿಸಿರುವ ಹುದ್ದೆಗಳಿಗೆ ನೇಮಿಸಿ ಆದೇಶಿಸಿದೆ.

ಸ್ಥಳನಿಯುಕ್ತಿಗೊಳಸಿದ ಹುದ್ದೆಯಲ್ಲಿ ತಕ್ಷಣದಿಂದ ಕಾರ್ಯವರದಿ ಮಾಡಿಕೊಳ್ಳಲೂ ಸಹ ಸೂಚಿಸಿದೆ.

| ಕ್ರ. ಸಂ. | ಅಧಿಕಾರಿ ಹೆಸರು ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ಮತ್ತು ಇಲಾಖೆ ಶ್ರೀಯುತರು/ಶ್ರೀಮತಿ | ಸ್ಥಳನಿಯುಕ್ತಿಗೊಳಸಿದ ಹುದ್ದೆ. |
|---|---|---|
| 1 | ಬಿ.ಎ.ಪರಮೇಶ್<br>ಆಯುಕ್ತರು,<br>ನಗರಾಭಿವೃದ್ಧಿ ಪ್ರಾಧಿಕಾರ,<br>ಚಿಕ್ಕಮಗಳೂರು | ಇವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯಿಂದ ಹಿಂದಕ್ಕೆ ಪಡೆದು<br>ಉಪ ಕಾರ್ಯದರ್ಶಿ<br>ಜಿಲ್ಲಾ ಪಂಚಾಯತ್,<br>ಗದಗ- ಇಲ್ಲಿನ ಖಾಲಿ ಹುದ್ದೆಗೆ ನೇಮಿಸಿದೆ. |

| | | |
|---|---|---|
| 2 | ಎಂ.ಉಮಾನಂದ ರೈ<br>ಉಪ ಆಯುಕ್ತರು,<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. | ಇವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯಿಂದ ಹಿಂದಕ್ಕೆ ಪಡೆದು<br>ಯೋಜನಾ ನಿರ್ದೇಶಕರು,<br>ಡಿ.ಆರ್.ಡಿ.ಎ.ಕೋಶ,<br>ಜಿಲ್ಲಾ ಪಂಚಾಯತ್, **ರಾಯಚೂರು**- ಇಲ್ಲಿನ ಖಾಲಿ ಹುದ್ದೆಗೆ ನೇಮಿಸಿದೆ. |
| 3 | ಸರ್ವರ್ ಮರ್ಚಂಟ್<br>ಪೌರಾಯುಕ್ತರು,<br>ಹೆಬ್ಬಗೂಡಿ ನಗರ ಸಭೆ<br>ಬೆಂಗಳೂರು ನಗರ ಜಿಲ್ಲೆ. | ಇವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯಿಂದ ಹಿಂದಕ್ಕೆ ಪಡೆದು<br>ಜಂಟಿ ನಿರ್ದೇಶಕರು,<br>**ಸ್ವ ಉದ್ಯೋಗ ಕಾರ್ಯಕ್ರಮ**<br>ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.<br>ಬೆಂಗಳೂರು - ಇಲ್ಲಿನ ಖಾಲಿ ಹುದ್ದೆಗೆ ನೇಮಿಸಿದೆ. |
| 4 | ಕೆ.ಎನ್.ವಿಜಯಪ್ರಕಾಶ್.<br>ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು. | ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಹಿಂದಕ್ಕೆ ಪಡೆದು,<br>ಮುಖ್ಯಸ್ಥರು,<br>**ಗ್ರಾಮ ಸ್ವರಾಜ್ ಯೋಜನೆ,**<br>ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,<br>ಬೆಂಗಳೂರು - ಇಲ್ಲಿನ ಖಾಲಿ ಹುದ್ದೆಗೆ ನೇಮಿಸಿದೆ. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಸಿದ್ದೇಶ್ ಪೊತಲಕಟ್ಟಿ)**
ಸರ್ಕಾರದ ಉಪ ಕಾರ್ಯದರ್ಶಿ(ಆ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿ. ಮತ್ತು ಆ.ಸು.ಇಲಾಖೆ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ.
5) ಆಯುಕ್ತರು, ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ, ಬೆಂಗಳೂರು.
6) ಸಂಬಂಧಪಟ್ಟ ಅಧಿಕಾರಿಗಳು.
7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಗದಗ / ರಾಯಚೂರು
8) ಅಭಿಯಾನ ನಿರ್ದೇಶಕರು, ಎನ್.ಆರ್.ಎಲ್.ಎಂ., ಶೇಷಾದ್ರಿ ರಸ್ತೆ, ಬೆಂಗಳೂರು.
9) ಮುಖ್ಯಸ್ಥರು, ಗ್ರಾಮ ಸ್ವರಾಜ್ ಯೋಜನೆ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು.
10) ಗ್ರಾ.ಅ.ಪಂ.ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ.
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ,
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4) ಮೇಲ್ವಿಚಾರಕರು, ಗಣಕ ಕೋಶ- ಗ್ರಾ.ಅ.ಪಂ.ರಾಜ್ ಇಲಾಖೆಯ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.